A-PDF Merger DEMO : Purchase from www.A-PDF.com to remove the watermark



**ಕರ್ನಾಟಕ ಸರ್ಕಾರ**

ಸಂಖ್ಯೆ: ಸಕಇ 38 ಎಸ್‌ಎಲ್‌ಪಿ 2012

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ,
ಬೆಂಗಳೂರು, ದಿನಾಂಕ:11.04.2012.

**ಸುತ್ತೋಲೆ**

ವಿಷಯ: ದಿನಾಂಕ.14-04-2012 ರಂದು ಸಂವಿಧಾನ ಶಿಲ್ಪಿ ಭಾರತರತ್ನ ಡಾ:ಬಿ.ಆರ್. ಅಂಬೇಡ್ಕರ್ ರವರ ಜನ್ಮ ದಿನಾಚರಣೆ ಸಮಾರಂಭ ಆಯೋಜಿಸುವ ಬಗ್ಗೆ.

----

ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ:ಬಿ.ಆರ್. ಅಂಬೇಡ್ಕರ್ ರವರ 121ನೇ ಜನ್ಮ ದಿನಾಚರಣೆಯನ್ನು ದಿನಾಂಕ:14-04-2012 ರಂದು ವಿಧಾನಸೌಧದ ಪೂರ್ವ ಭಾಗದಲ್ಲಿರುವ ಪ್ರತಿಮೆಗೆ ಸನ್ಮಾನ್ಯ ಮುಖ್ಯಮಂತ್ರಿಗಳಿಂದ ಹಾಗೂ ಇತರೆ ಗಣ್ಯರಿಂದ ಮಾಲಾರ್ಪಣೆ ಮಾಡುವ ಕಾರ್ಯಕ್ರಮವಿರುತ್ತದೆ. ಹಾಗೂ ಅದೇ ದಿನ ಸಾಯಂಕಾಲ 5-00 ಗಂಟೆಗೆ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಸಾರ್ವಜನಿಕ ಸಮಾರಂಭವನ್ನು ಸಹ ಆಯೋಜಿಸಲಾಗಿದೆ.

ಈ ಕಾರ್ಯಕ್ರಮದಲ್ಲಿ ತಪ್ಪದೇ ಪಾಲ್ಗೊಳ್ಳುವಂತೆ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಡಿ.ದೇವರಾಜು ಅರಸು ಅಭಿವೃದ್ಧಿ ನಿಗಮ/ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ/ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ/ಬಂಜಾರ ತಾಂಡಾ ಅಭಿವೃದ್ಧಿ ನಿಗಮ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಹಾಗೂ ಕೇಂದ್ರ ಪರಿಹಾರ ಸಮಿತಿಗಳಲ್ಲಿನ ಎಲ್ಲಾ ಅಧಿಕಾರಿಗಳು/ಸಿಬ್ಬಂದಿಗಳು ಈ ಕಾರ್ಯಕ್ರಮಗಳಿಗೆ ಕಡ್ಡಾಯವಾಗಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಈ ಮೂಲಕ ಸೂಚಿಸಲಾಗಿದೆ.

ಸದರಿ ಕಾರ್ಯಕ್ರಮಕ್ಕೆ ಭಾಗವಹಿಸದೇ ಗೈರುಹಾಜರಾದಲ್ಲಿ ಈ ಅಂಶವನ್ನು ಗಂಭೀರವಾಗಿ ಪರಿಗಣಿಸಿ 1966ರ ಕರ್ನಾಟಕ ನಾಗರಿಕ ಸೇವೆಗಳು (ನಡತೆ) ನಿಯಮಾವಳಿಗಳ ಉಲ್ಲಂಘನೆಗಾಗಿ ಅಂತಹ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ
11/4/12
(ಟಿ.ಸಿ.ಕಾಂತರಾಜ್)
ಸರ್ಕಾರದ ಅಧೀನ ಕಾರ್ಯದರ್ಶಿ-1 (ಪ್ರ),
ಸಮಾಜ ಕಲ್ಯಾಣ ಇಲಾಖೆ

**ಪ್ರತಿಯನ್ನು:-**

1. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು
3. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜು ಅರಸು ಅಬಿವೃದ್ಧಿ ನಿಗಮ, ಬೆಂಗಳೂರು
5. ವ್ಯವಸ್ಥಾಪಕ ನಿರ್ದೇಶಕರು, ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಡಾ:ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ,ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ಬಂಜಾರ ತಾಂಡಾ ಅಭಿವೃದ್ಧಿ ನಿಗಮ, ಬೆಂಗಳೂರು.
8. ಕಾರ್ಯ ನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
9. ಕಾರ್ಯದರ್ಶಿಗಳು, ಕೇಂದ್ರ ಪರಿಹಾರ ಸಮಿತಿ, ಬೆಂಗಳೂರು.
10. ಶಾಖಾ ರಕ್ಷಾ ಕಡತ/ಬಿಡಿಪ್ರತಿಗಳು